ಕಳೆದುಕೊಂಡಿದ್ದರಿಂದ ಪರೀಕ್ಷೆಯಲ್ಲಿ ವಿಫಲವಾಗಿರುವುದಕ್ಕೆ ಪ್ರಮುಖ ಕಾರಣವಾಗಿರುತ್ತದೆಂದು ಗುತ್ತಿಗೆದಾರರು ತಿಳಿಸಿರುತ್ತಾರೆ. ಪುನಃ ಅದೇ ಮಾಡೆಲ್‌ನ ಎರಡನೇ ಸ್ಯಾಂಪಲ್‌ನ್ನು ಪರೀಕ್ಷೆಗೆ ಕಳುಹಿಸಿಕೊಟ್ಟಾಗ ಸಫಲವಾಗುತ್ತದೆ. ಹಾಗಾಗಿ ಇಂತಹ ಕಂಪನಿಗಳನ್ನು ಕಪ್ಪು ಪಟ್ಟಿಗೆ ಸೇರಿಸಿರುವುದಿಲ್ಲ.

ಈ) ಆಪಾದನೆ ಇರುವುದಿಲ್ಲ.

ಬಿ.ಐ.ಎಸ್. 8034/2002 ಮಾನದಂಡಕ್ಕನುಗುಣವಾಗಿ ಸಬ್‌ಮರ್ಸಿಬಲ್ ಪಂಪ್‌ಸೆಟ್‌ಗಳನ್ನು ಹಾಗೂ ಐ.ಎಸ್. ಮಾನದಂಡ ಇರುವ ಸಂಬಂಧಿಸಿದ ಪೂರಕ ಸಾಮಗ್ರಿಗಳನ್ನು ಸಹ ಸರಬರಾಜು ಮಾಡುತ್ತಿದ್ದು, ಸರಬರಾಜು ಮಾಡುವ ಪೂರ್ವದಲ್ಲಿ ಸಬ್‌ಮರ್ಸಿಬಲ್ ಪಂಪ್‌ಸೆಟ್ ಮತ್ತು ಪೂರಕ ಸಾಮಗ್ರಿಗಳ ಗುಣಮಟ್ಟ ಪರೀಕ್ಷೆಯನ್ನು 3ನೇ ತಪಾಸಣೆ ಸಂಸ್ಥೆಯವರಿಂದ ಕೈಗೊಂಡು, ಗುಣಮಟ್ಟ ದೃಢೀಕರಿಸಿ ಪ್ರಮಾಣ ಪತ್ರ ನೀಡಿದ ನಂತರವೇ ಫಲಾನುಭವಿಗಳಿಗೆ ನೀಡಲಾಗುತ್ತಿದೆ. ಕೊಳವೆಬಾವಿಗೆ ವಿದ್ಯುತ್ ಸಂಪರ್ಕ ಕಲ್ಪಿಸಿದ ದಿನಾಂಕದಿಂದ 2 ವರ್ಷಗಳವರೆಗೆ ಪಂಪ್‌ಸೆಟ್ ಹಾಗೂ ಪೂರಕ ಸಾಮಗ್ರಿಗಳಿಗೆ ಗ್ಯಾರಂಟಿ ಇರುತ್ತದೆ. ಈ ಅವಧಿಯಲ್ಲಿ ಯಾವುದೇ ದೋಷ ಕಂಡಬಂದಲ್ಲಿ ಸರಬರಾಜುದಾರರು ಅದನ್ನು ಸರಿಪಡಿಸಬೇಕು ಅಥವಾ ಬದಲಾಯಿಸಬೇಕಾಗಿರುತ್ತದೆ.

ರೈತರ ಪಂಪ್‌ಸೆಟ್ಟುಗಳಿಗೆ ಬೇಡಿಕೆಗೆ ಅನುಗುಣವಾಗಿ ವಿದ್ಯುತ್ ಮಂಜೂರಾತಿ

223 (599) ಶ್ರೀ ಸಿದ್ದು ಸವದಿ (ತೇರದಾಳ್) ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರೈತರ ಬೇಡಿಕೆಗೆ ಅನುಗುಣವಾಗಿ ವಿದ್ಯುತ್ ಸರಬರಾಜು ಕೊಡದೇ ಇರಲು ಕಾರಣಗಳೇನು; ಇದರಿಂದ ಇಲಾಖೆಗೆ ಭಾರಿ ನಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ರೈತರು ಸರಬರಾಜು ಬೇಡಿದಾಗ ಕೊಡದೇ ಇರುವುದರಿಂದ ರೈತ ಅನಧಿಕೃತವಾಗಿ ಸರಬರಾಜು ಪಡೆಯುವುದರಿಂದ ಪರಿವರ್ತಕಗಳು ಸುಟ್ಟು ಕೋಟ್ಯಾಂತರ ರೂಪಾಯಿಗಳ ಹಾನಿಯಾಗುತ್ತಿದ್ದು, ಅದನ್ನು ತಡೆಯಲು ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು?

ಕು॥ ಶೋಭಾ ಕರಂದ್ಲಾಜೆ (ಇಂಧನ ಸಚಿವರು):

ಅ) ರಾಜ್ಯಾದ್ಯಂತ ಸರ್ಕಾರದ ಆದೇಶದಂತೆ "ಕಪ್ಪು" ಮತ್ತು "ಬೂದು" ಪ್ರದೇಶಗಳನ್ನು ಹೊರತುಪಡಿಸಿ, ಉಳಿದ ಪ್ರದೇಶಗಳಲ್ಲಿನ ರೈತರು ನೀರಾವರಿ

ಪಂಪುಸೆಟ್ಟುಗಳಿಗೆ ವಿದ್ಯುತ್ ಸಂಪರ್ಕ ಕೋರಿ ಅರ್ಜಿ ಸಲ್ಲಿಸಿದಲ್ಲಿ, ಜೇಷ್ಠತೆ ಆಧಾರದ ಮೇಲೆ ನಿಯಮಗಳನ್ನು ಪಾಲಿಸಿ, ವಿದ್ಯುತ್ ಸಂಪರ್ಕ ಕಲ್ಪಿಸಲು ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಆ) ರೈತರು ಅನಧಿಕೃತವಾಗಿ ವಿದ್ಯುತ್ ಸಂಪರ್ಕ ಪಡೆದು ಕೊಳ್ಳುತ್ತಿರುವುದರಿಂದ ಪರಿವರ್ತಕಗಳು ಸುಟ್ಟು ನಷ್ಟ ಉಂಟಾಗುವ ಸಾಧ್ಯತೆಗಳಿದ್ದು ಇದನ್ನು ತಪ್ಪಿಸಲು ಅನಧಿಕೃತ ನೀರಾವರಿ ಪಂಪುಸೆಟ್ಟುಗಳನ್ನು ಸಕ್ರಮೀಕರಣಗೊಳಿಸಲು ಸರ್ಕಾರದಿಂದ ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಬನಹಟ್ಟಿ ನಗರದಲ್ಲಿ ಅಗ್ನಿಶಾಮಕ ಠಾಣೆ ಪ್ರಾರಂಭಿಸುವುದು

224 (600) ಶ್ರೀ ಸಿದ್ದು ಸವದಿ (ತೇರದಾಳ್) ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಬಕವಿ-ಬನಹಟ್ಟಿ ನಗರಸಭೆಯ ವ್ಯಾಪ್ತಿಯಲ್ಲಿ ಅಗ್ನಿಶಾಮಕ ಠಾಣೆ ಪ್ರಾರಂಭಿಸಲು ಬೇಡಿಕೆ ಇದ್ದದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು;

ಆ) ಅಗ್ನಿಶಾಮಕ ಠಾಣೆಯನ್ನು ಹೊಸದಾಗಿ ಪ್ರಾರಂಭಿಸಲು ಇರುವ ನಿಯಮಾವಳಿಗಳೇನು;

ಇ) ತೇರದಾಳ ಮತಕ್ಷೇತ್ರದಲ್ಲಿ ಯಾವುದೇ ಅಗ್ನಿಶಾಮಕ ಠಾಣೆ ಇಲ್ಲದೇ ಇರುವುದರಿಂದ ಅನಾಹುತ ಸಂಭವಿಸಿದಲ್ಲಿ ಸುಮಾರು 50 ಕಿ.ಮೀಟರ್‌ದಿಂದ ಗಾಡಿ ಬರುವುದರ ಒಳಗಾಗಿ ಎಲ್ಲಾ ಸುಟ್ಟು ಭಸ್ಮವಾಗಿ ಹೋಗುವುದರಿಂದ ಇದು ಅವಶ್ಯಕವಾದುದಲ್ಲವೇ;

ಈ) ತೇರದಾಳ ಮತಕ್ಷೇತ್ರದಲ್ಲಿ ಒಂದು ಸ್ಪಿನ್ನಿಂಗ್ ಮಿಲ್ ಹಾಗೂ ಒಂದು ಸಕ್ಕರೆ ಕಾರ್ಖಾನೆ ಸುಮಾರು 10 ಸಾವಿರ ಪವರ್ ಲೂಮುಗಳಿದ್ದು, ಬಹಳ ಜರೂರ್ ಠಾಣೆ ಅವಶ್ಯಕತೆ ಇರುವುದು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಆರ್. ಅಶೋಕ (ಗೃಹ ಮತ್ತು ಸಾರಿಗೆ ಸಚಿವರು):

ಅ) ಹೌದು.

ರಾಜ್ಯದಲ್ಲಿ ಬಾಕಿ ಇರುವ ಎಲ್ಲಾ 34 ತಾಲ್ಲೂಕು ಕೇಂದ್ರಗಳಲ್ಲಿ ಅಗ್ನಿಶಾಮಕ ಠಾಣೆಗಳನ್ನು ತೆರೆದ ನಂತರ ಈ ಬಗ್ಗೆ ಪರಿಶೀಲಿಸಲಾಗುವುದು.

ಆ) ಈ ಬಗ್ಗೆ ಯಾವುದೇ ನಿರ್ದಿಷ್ಟ ನಿಯಮಾವಳಿಗಳಿರುವುದಿಲ್ಲ.

ಆದರೆ, ಕೇಂದ್ರ ಸರ್ಕಾರದ ಗೃಹ ಮಂತ್ರಾಲಯದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ Standing Fire Advisory Council ರವರು ನಿಗದಿಪಡಿಸಿರುವ ಮಾನದಂಡದಂತೆ ಪ್ರತೀ 50,000 ಜನಸಂಖ್ಯೆಗೆ ಒಂದು